[redacted]



# ಮಕ್ಕಳನ್ನು ಚುನಾವಣಾ ಕಾರ್ಯ, ಪ್ರಚಾರ ಕಾರ್ಯಗಳಲ್ಲಿ ಬಳಸಿಕೊಳ್ಳದಂತೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ



ಬಳ್ಳಾರಿ,ಏ-:ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣೆ ಕಾರ್ಯ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.ಭಾರತ ಸರ್ಕಾರ ಮತ್ತು ವಿಶ್ವಸಂಸ್ಥೆಯು ಅನುಮೋದಿತ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಸಂಬಂಧಿಸಿದಂತೆ ಮಕ್ಕಳ ಆರೋಗ್ಯ ಮತ್ತು ಶಿಕ್ಷಣಕ್ಕೆ ಅಪಾಯಕಾರಿಯಾದ ಕ್ಷೇತ್ರಗಳಲ್ಲಿ ಮಕ್ಕಳು ಕಾರ್ಯನಿರ್ವಹಿಸದಂತೆ ಹಾಗೂ ಮಕ್ಕಳ ಬೆಳವಣಿಗೆಗೆ ತೊಡಕನ್ನುಂಟು ಮಾಡುವ ಯಾವುದೇ ಚಟುವಟಿಕೆಯಲ್ಲಿ ಭಾಗವಹಿಸದಂತೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಿದೆ.

ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗವು ಚುನಾ ವಣಾ ಕಾರ್ಯಗಳಲ್ಲಿ ಯಾವುದೇ ಪಕ್ಷಗಳು 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಅಗತ್ಯ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಕೋರಿದ್ದು, ಒಂದು ವೇಳೆ ಚುನಾವಣಾ ಕಾರ್ಯದಲ್ಲಿ ಮಕ್ಕಳ 'ನ್ನು ಬಳಸಿಕೊಂಡಲ್ಲಿ ಕಾಯ್ದೆ ಯ ನ್ವಯ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಅಲ್ಲಂ ಪ್ರಶಾಂತ್ ಅವರ ಅಧ್ಯಕ್ಷತೆಯಲ್ಲಿ ನೂತನ ಜಿಲ್ಲಾ ಕಾಂಗ್ರೆಸ್ ಕಚೇರಿ ಉದ್ಘಾಟನೆ

## ನೂತನ ಕಚೇರಿಯ ಸ್ಥಾಪನೆ ನಮ್ಮ ಕಾರ್ಯಕರ್ತರಲ್ಲಿ ಹೊಸ ಚೈತನ್ಯವನ್ನು ತಂದಿದೆ-ಅಲ್ಲಂ ಪ್ರಶಾಂತ್



ಬಳ್ಳಾರಿ ಏ -: ಬಳ್ಳಾರಿ ನಗರದ ಗಾಂಧಿನಗರ ಮಾರುಕಟ್ಟೆ ಹತ್ತಿರ, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಅಲ್ಲಂ ಪ್ರಶಾಂತ್ ಅವರ ಅಧ್ಯಕ್ಷತೆಯಲ್ಲಿ ದಿನಾಂಕ 18-04-2024ರ ಗುರುವಾರರಂದು ನೂತನ ಜಿಲ್ಲಾ ಕಾಂಗ್ರೆಸ್ ಕಚೇರಿಯನ್ನು ಉದ್ಘಾಟಿಸಲಾಯಿತು. ಈ ಸಮಾರಂಭದಲ್ಲಿ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಹಾಗೂ ಬಳ್ಳಾರಿ ನಗರ ಶಾಸಕರಾದ ನಾರಾ ಭರತ್ ರೆಡ್ಡಿ ಅವರು ಹಾಗೂ ಜಿಲ್ಲಾಧ್ಯಕ್ಷರಾದ ಅಲ್ಲಂ ಪ್ರಶಾಂತ್ ಅವರು ಮತ್ತು ಪಕ್ಷದ ಹಿರಿಯ ನಾಯಕರು ರಿಬ್ಬನ್ ಕತ್ತರಿಸುವ ಮೂಲಕ ಕಚೇರಿಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಜಿಲ್ಲಾ ಅಧ್ಯಕ್ಷರಾದ ಅಲ್ಲಂ ಪ್ರಶಾಂತ್ ಅವರು ಈ ನೂತನ ಕಚೇರಿಯ ಸ್ಥಾಪನೆಯು ನಮ್ಮ ಕಾರ್ಯಕರ್ತರಲ್ಲಿ ಹೊಸ ಚೈತನ್ಯವನ್ನು ತಂದಿದೆ. ಈ ಲೋಕಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯ ಪರ ಎಲ್ಲಾ ಕಾರ್ಯಕರ್ತರು ಸಂಘಟಕರಾಗಿ ಕೆಲಸ ಮಾಡಲು ಅನುಕೂಲವಾಗುವಂತೆ ನಗರದ ಹೃದಯ ಭಾಗದಲ್ಲಿ ಕಚೇರಿಯನ್ನು ಸ್ಥಾಪಿಸಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಲಿಡ್ಕರ್ ಮಂಡಳಿ ಅಧ್ಯಕ್ಷರಾದ ಮುಂಡ್ರಿಗಿ ನಾಗರಾಜ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜೆ.ಎಸ್.ಆಂಜಿನೇಯಲು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಬಿ.ಮುರಳಿ ಕೃಷ್ಣ, ಕೆಪಿಸಿಸಿ ಪ್ರಚಾರ ಸಮಿತಿಯ ರಾಜ್ಯ ಸಂಯೋಜಕರಾದ ವೆಂಕಟೇಶ್ ಹೆಗಡೆ,ಕೆಪಿಸಿಸಿ ಮಾಜಿ ಕಾರ್ಯದರ್ಶಿಗಳಾದ ಕಮಲಾ ಮರಿಸ್ವಾಮಿ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀ ಏ.ಮಾನಯ್ಯ, ಕೆಪಿಸಿಸಿ ಸದಸ್ಯರಾದ ಎಲ್.ಮಾರೆಣ್ಣ, ಮಹಾನಗರ ಪಾಲಿಕೆಯ ಮಹಾಪೌರರಾದ ಶ್ವೇತಾ ಬಿ.ಸೋಮು, ಉಪಮಹಾಪೌರರಾದ ಬಿ.ಜಾನಕಮ್ಮ, ಹಿರಿಯ ಕಾಂಗ್ರೆಸ್ ಮುಖಂಡರಾದ ಬಿ.ರಾಮ್ ಪ್ರಸಾದ್, ಬಳ್ಳಾರಿ ಜಿಲ್ಲಾ ನಗರ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷರಾದ ಬೋಯಾಪಾಟಿ ವಿಷ್ಣು, ಉಪಾಧ್ಯಕ್ಷರಾದ ಪೆರಮ್ ವಿವೇಕ್, ಪ್ರಧಾನ ಕಾರ್ಯದರ್ಶಿಗಳಾದ ಪಿ.ಗಾದೆಪ್ಪ, ಮೋಕ ರೂಪನಗುಡಿ ಬ್ಲಾಕ್ ಅಧ್ಯಕ್ಷರಾದ ಮೀನಳ್ಳಿ ಚಂದ್ರಶೇಖರ್, ಕೌಲ್ ಬಜಾರ್ ಬ್ಲಾಕ್ ಅಧ್ಯಕ್ಷರಾದ ಅಲ್ಲಾ ಭಕಾಶ್, ಬ್ರೂಸ್ ಪೇಟ್ ಬ್ಲಾಕ್ ಅಧ್ಯಕ್ಷರಾದ ಹುಸೇನ್ ಪೀರ್ ಸಾಬ್, ಕಂಟೋನ್ಮೆಂಟ್ ಬ್ಲಾಕ್ ಅಧ್ಯಕ್ಷರಾದ ಅಭಿಲಾಶ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಎಂ.ಎಸ್.ಮಂಜುಳಾ, ಎಸ್.ಸಿ ವಿಭಾಗದ ಅಧ್ಯಕ್ಷರಾದ ಎನ್.ವಿ.ಯರಕುಲ ಸ್ವಾಮಿ, ಒಬಿಸಿ ವಿಭಾಗದ ಅಧ್ಯಕ್ಷರಾದ ಸರಗು ನಾಗರಾಜ್, ಅಸಂಘಟಿತ ಕಾರ್ಮಿಕ ವಿಭಾಗದ ಅಧ್ಯಕ್ಷರಾದ ಅಲಿವೇಲು ಸುರೇಶ್, ಸಾಮಾಜಿಕ ಜಾಲತಾಣ ವಿಭಾದ ಅಧ್ಯಕ್ಷರಾದ ಶೇಖ್ ಅಫಕ್ ಹುಸೇನ್, ಕಾರ್ಮಿಕ ವಿಭಾಗದ ಅಧ್ಯಕ್ಷರಾದ ಚಾನಾಳ್ ಪಿ.ಮಂಜುನಾಥ್, ಮಹಾನಗರ ಪಾಲಿಕೆ ಸದಸ್ಯರಾದ ಕಮೆಲ ಸೂರಿ, ಎಂ.ಪ್ರಭಂಜನ್ ಕುಮಾರ್, ಶಿವರಾಜ್, ಜಬ್ಬಾರ್ ಸಾಬ್, ಬಿ.ಆರ್.ಎಲ್.ಶ್ರೀನಿವಾಸ್, ನಂದೀಶ್, ನಾಗಲಕೇರಿ ಗೋವಿಂದ, ರಾಜೇಶ್ವರಿ ಸುಬ್ಬಾರಾಯುಡು, ಮೊಹಮ್ಮದ್, ಕುಬೇರ, ಜಗನ್ನಾಥ್, ನೂರ್ ಮೊಹಮ್ಮದ್, ಕೆ.ಹೊನ್ನಪ್ಪ, ಉಮಾಪತಿ, ಮಿಂಚು ಶ್ರೀನಿವಾಸ್, ನಾಮ ನಿರ್ದೇಶಿತ ಸದಸ್ಯರಾದ ಸಮೀರ್ ಭಾಷಾ, ಪರಾಜಿತ ಅಭ್ಯರ್ಥಿಗಳಾದ ವೀರೇಂದ್ರ ಕುಮಾರ್, ಬೆಣಕಲ್ ಬಸವರಾಜ್ ಗೌಡ, ಟಿ.ಲೋಕೇಶ್, ಕಾರ್ಕೋಡಪ್ಪ, ಬಜ್ಜಪ್ಪ, ನಾರಾ ವಿನಯ್ ಕುಮಾರ್, ಸಿದ್ದೇಶ್, ಟಿ.ಲೋಕೇಶ್, ಭಗರ್ ಹೊಕುಮ್ ಅಧ್ಯಕ್ಷರಾದ ಹೊನ್ನಳ್ಳಿ ತಿಮ್ಮನಗೌಡ, ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಕೆ.ಈ.ಚಿದಾನಂದಪ್ಪ, ಸರ್ಕಾರದ ಎಲ್ಲಾ ಇತರ ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರುಗಳು ಹಾಗೂ ಸದಸ್ಯರು, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಎಲ್ಲಾ ಪದಾಧಿಕಾರಿಗಳು, ಮುಂಚೂಣಿ ಘಟಕಗಳ ಅಧ್ಯಕ್ಷರುಗಳು, ಮಹಾನಗರ ಪಾಲಿಕೆಯ ಎಲ್ಲಾ ಹಾಲಿ/ಮಾಜಿ ಸದಸ್ಯರು, ಜಿಲ್ಲಾ/ತಾಲೂಕು/ಗ್ರಾಮ ಪಂಚಾಯಿತಿಗಳ ಸದಸ್ಯರುಗಳು ಹಾಗೂ ಅಪಾರ ಸಂಖ್ಯೆಯ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಳ್ಳಾರಿ-ಮತದಾನ ಹೆಚ್ಚಳಕ್ಕೆ ವಿನೂತನ ಅಭಿಯಾನ

## ಬೆಳಗಲ್ ಗ್ರಾಮದಲ್ಲಿ ಅರಿಶಿಣ, ಕುಂಕುಮ ವಿತರಿಸಿ ಮತದಾನ ಜಾಗೃತಿ



ಬಳ್ಳಾರಿ,ಏ-:ಲೋಕಸಭಾ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸಲು ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಈಗಾಗಲೇ ಭರದ ಸಿದ್ಧತೆ ನಡೆಸಿದ್ದು, ಕಳೆದ ಸಲಕ್ಕಿಂತ ಈ ಬಾರಿ ಮತದಾನ ಪ್ರಮಾಣ ಹೆಚ್ಚಳ ಮಾಡಲು ಹಲವು ವಿನೂತನ ಕಾರ್ಯ ಚಟುವಟಿಕೆಗಳನ್ನು ರೂಪಿಸಿದೆ.

ಕಳೆದ ಲೋಕಸಭೆ ಚುನಾವಣೆಯ ಮತದಾನ ಪ್ರಮಾಣಕ್ಕಿಂತ ಈ ಬಾರಿ ಹೆಚ್ಚು ಪ್ರಮಾಣದಲ್ಲಿ ಹೆಚ್ಚಳ ಮಾಡುವ ಗುರಿ ಹೊಂದಿದ್ದು, ಇದಕ್ಕೆ ಪೂರಕವಾಗಿ ಈಗಾಗಲೇ ಬಳ್ಳಾರಿ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾನದ ಕುರಿತು ಜನಜಾಗೃತಿ ಮೂಡಿಸುವ ಕಾರ್ಯಚಟುವಟಿಕೆ ಹಮ್ಮಿಕೊಂಡಿದೆ.ಜಿಲ್ಲಾ ಸ್ವೀಪ್ ಸಮಿತಿಯು ಮಾದರಿ ನೀತಿ ಸಂಹಿತೆ ಜಾರಿಯಾದಾಗಿನಂದ ಅನೇಕ ವಿನೂತನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಪ್ರಮುಖವಾಗಿ ವಾಕ್‌ಥಾನ್, ಸಹಿ ಸಂಗ್ರಹ ಅಭಿಯಾನ, ಸೈಕಲ್ ಜಾಥಾ, ಪಂಜಿನ ಮೆರವಣಿಗೆ, 'ನಮ್ಮ ನಡೆ ಮತಗಟ್ಟೆ ಕಡೆ', ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆ, ಶಾಲೆ, ಕಾಲೇಜು, ಹಾಸ್ಟೆಲ್ ವಿದ್ಯಾರ್ಥಿಗಳಿಂದ ಪೋಷಕರಿಗೆ 'ಪತ್ರ ಚಳವಳಿ', ಎತ್ತಿನ ಬಂಡಿಗಳ ಮೆರವಣಿಗೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮತದಾರರ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ.

ಅರಿಸಿನ- ಕುಂಕುಮದ ಕರೆಯೋಲೆ:*-ಬಳ್ಳಾರಿ ಲೋಕಸಭಾ ಕ್ಷೇತ್ರ ಚುನಾವಣೆಗೆ ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಗ್ರಾಮೀಣ ಪ್ರದೇಶದ ಮಹಿಳೆಯರಿಗೆ 'ಅರಿಸಿನ ಕುಂಕುಮ ಹಾಗೂ ಕರೆಯೋಲೆ' ನೀಡಿ ಮತದಾನಕ್ಕೆ ಆಹ್ವಾನಿಸಲಾಗುತ್ತಿದೆ. ಮೇ 07 ರಂದು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಕೋರಲಾಗುತ್ತಿದೆ.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಗುರುವಾರ ಕುಡತಿನ ವಲಯದ ಬೆಳಗಲ್ ಗ್ರಾಮದಲ್ಲಿ ಮಹಿಳೆಯೊಬ್ಬರಿಗೆ ಕುಂಕುಮ ಹಚ್ಚಿ ಮತದಾನಕ್ಕೆ ಜಾಗೃತಿ ಮೂಡಿಸುತ್ತಿರುವುದು ವಿಶೇಷವಾಗಿ ಕಂಡುಬಂತು.ಕುಡತಿನ ವಲಯದ ಅಂಗನವಾಡಿ ಮೇಲ್ವಿಚಾರಕಿ ಸುಮಂಗಳಮ್ಮ ಅವರು ಮನೆ-ಮನೆಗೆ ತೆರಳಿ ಮಹಿಳೆಯರಿಗೆ ಅರಿಶಿಣ-ಕುಂಕುಮ ವಿತರಣೆ ಮಾಡುವ ಮೂಲಕ ತಪ್ಪದೇ ಮತದಾನ ಮಾಡುವಂತೆ ತಿಳಿಸಿದರು.ಈ ವೇಳೆ ಅಂಗನವಾಡಿ ಕಾರ್ಯಕರ್ತೆಯರು, ಸಿಬ್ಬಂದಿಗಳು ಹಾಗೂ ಇತರರು ಹಾಜರಿದ್ದರು.

# ಬೆಳಗಾವಿ ಜಿಲ್ಲೆಯ 30 ಬೇರ ಫುಟ್ ಟೆಕ್ನಿಸಿಯನ್‌ಗಳಿಗೆ ತರಬೇತಿ ಕಾರ್ಯಾಗಾರ

ಬೆಳಗಾವಿ,ಏ.19 : ಜಿಲ್ಲಾ ಪಂಚಾಯತ ಸಂಪನ್ಮೂಲ ಕೇಂದ್ರ ಮಚ್ಚೆಯಲ್ಲಿ ಏ.15 ರಿಂದ 18 ರವರೆಗೆ ನಾಲ್ಕು ದಿನಗಳ ಅವಧಿಯಲ್ಲಿ ಸಂಕ ಪಾಂಡ, ಡ್ರೈನೇಜ, ಅಡವಾನ್ಸ್ ಡಗ್ ಪಾಯಿಂಟ್ ಹಾಗೂ ಜಮೀನು ಅಭಿವೃದ್ಧಿ, ಭೂಮಿ ಸಮತಟ್ಟು ಯಾವ ರೀತಿ ಮಾಡಬೇಕು ಎಂಬುದನ್ನು ಪ್ರಾಯೋಗಿಕವಾಗಿ ನಾಲ್ಕು ತಂಡಗಳಾಗಿ ವಿಂಗಡಿಸಿ ಅವರಿಗೆ ಕೆಲಸವನ್ನು ನೀಡಲಾಯಿತು.ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಹಾಗೂ ಅಬ್ದುಲ್ ನಜೀರ ಸಾಬ ರಾಜ್ಯ ಗ್ರಾಮೀಣಾಭಿವೃದ್ಧಿ & ಪಂಚಾಯತ ರಾಜ ಸಂಸ್ಥೆ, ಮೈಸೂರು ಹಾಗೂ ಜಿಲ್ಲಾ ಪಂಚಾಯತ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ಹಾಗೂ ಉಡುಪಿ ಜಿಲ್ಲೆಯ 30 ಬೇರ ಫುಟ್ ಟೆಕ್ನಿಸಿಯನ್‌ಗಳಿಗೆ ವಸತಿ ಸಹಿತ 90 ದಿನಗಳ ತರಬೇತಿ ಕಾರ್ಯಾಗಾರವನ್ನು ಆಲ್ ಇಂಡಿಯಾ ಇನ್ಸ್ಟಿಟ್ಯೂಟ್ ಆಫ್ ಲೋಕಲ್ ಸೆಲ್ಫ್ ಗವರ್ನಮೆಂಟ್, ಬೆಳಗಾವಿಯಲ್ಲಿ ಆಯೋಜಿಸಲಾಗಿತು. ಸದರಿ ಈ ಕಾರ್ಯಾಗಾರದಲ್ಲಿ ಚಿಕ್ಕೋಡಿ ತಾಲೂಕು ಪಂಚಾಯತಿ ಟಿ.ಎ.ಇ ಸಲೀಂ ಮಲೀಕ ಯರನಾಳ, ಹಾಗೂ ಬೈಲಹೊಂಗಲ ತಾಲೂಕು ಪಂಚಾಯತಿಯ ತಾಂತ್ರಿಕ ಸಂಯೋಜಕರು ಸುನೀಲ ಔರನಾಳ, ಹಾಗೂ ವಿಕೇಂದ್ರಿಕೃತ ತರಬೇತಿ ಸಂಯೋಜಕರು ಬಿ. ಎಚ್. ಬಜಂತ್ರಿ, ಎ.ಎನ್.ಎಸ್.ಐ.ಆರ್.ಡಿ. ಮೈಸೂರು ಇವರ ಮಾರ್ಗದರ್ಶನಲ್ಲಿ ಯಶಸ್ವಿಗೊಳಿಸಲಾಯಿತು.

# ಆರೋಗ್ಯಕರ ಆಯುಷ್ ಪಾನಕ ಪರಿಚಯ

ಬೆಳಗಾವಿ,ಏ. : ಅತಿಯಾಗಿ ಬಿಸಿಲಿನ ತಾಪ ಹೆಚ್ಚುತ್ತಿರುವುದರಿಂದ ಸಾರ್ವಜನಿಕರು ಆಯುಷ್ ಇಲಾಖೆ ಪರಿಚಯಿಸಿರುವ ಹುಣಸೆ ಹಣ್ಣಿನ ಚಿಂಚಾ ಪಾನಕವನ್ನು ಸೇವಿಸಿ ಬಾಯಾರಿಕೆ ನಿವಾರಿಸಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಹೇಳಿದರು.

ಹುಕ್ಕೇರಿ ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ಗುರುವಾರ (ಏ.19) ಆಯುಷ್ ಇಲಾಖೆಯ ವತಿಯಿಂದ ರಾಷ್ಟ್ರೀಯ ಆಯುಷ್ ಅಭಿಯಾನಡಿ ಆರೋಗ್ಯಕರ ಚಿಂಚಾ ಪಾನಕ (ಹುಣಸೆ ಹಣ್ಣಿನ ಪಾನಕ)ವನ್ನು ಕರ್ತವ್ಯನಿರತ ಕಚೇರಿಯ ಸಿಬ್ಬಂದಿಗೆ ವಿತರಿಸಿ ಮಾತನಾಡಿದರು.

ಬಿಸಿಲಿನ ಧಗೆ ಕಡಿಮೆಯಾಗಿಲ್ಲ. ಮನೆಯಿಂದ ಹೊರಗೆ ಕಾಲಿಡುವುದು ಕೂಡ ಸಾಧ್ಯವಾಗುತ್ತಿಲ್ಲ. ಇಂತಹ ಸಮಯದಲ್ಲಿ ಬಾಯಾರಿಕೆ ನೀಗಿಸಿಕೊಳ್ಳಲು ಜನ ಆರೋಗ್ಯಕರ ಪಾನಕ ಸೇವಿಸಬೇಕು. ಬೇಸಿಗೆಯ ಧಗೆಯಿಂದ ದೇಹವನ್ನು ತಣಿಸಲು ಹುಣಸೆ ಹಣ್ಣಿನ ನೈಸರ್ಗಿಕ ಪಾನಕ ಅತ್ಯುತ್ತಮವಾಗಿವೆ ಎಂದು ತಿಳಿಸಿದರು.

ಬಾಯಾರಿಕೆ ನಿವಾರಣೆಗೆ, ದೇಹವನ್ನು ತಂಪುಗೊಳಿಸಲು ನಾವು ಮಾರ್ಕೆಟ್ ನಲ್ಲಿ ಸಿಗುವ ಅಡ್ಡಪರಿಣಾಮ ಬೀರುವ ತಂಪು ಪಾನೀಯಗಳನ್ನು ಸೇವಿಸುವುದು ಹೆಚ್ಚಾಗಿದೆ. ಅಂತಹ ಜ್ಯೂಸ್ ಗಳ ಮೊರೆ ಹೋಗದೆ ಆರೋಗ್ಯಕರ ಚಿಂಚಾ ಪಾನಕ ಸೇವಿಸುವುದು ಉತ್ತಮ ಇದರಿಂದ

ನಮ್ಮ ದೇಹದಲ್ಲಿ ಹೆಚ್ಚಿರುವ ಉಷ್ಣತೆಯನ್ನು ಕಡಿಮೆ ಮಾಡಲು ಸಹಕಾರಿಯಾಗಲಿದೆ ಎಂದು ಜಿ.ಪಂ ಸಿಇಒ ರಾಹುಲ ಶಿಂಧೆ ಅವರು ಸಲಹೆ ನೀಡಿದರು.

ಇದೇ ವೇಳೆ ಜಿಲ್ಲಾ ಆಯುಷ್ ಅಧಿಕಾರಿ ಶ್ರೀಕಾಂತ ಸುಣಧೊಳ್ಳಿ ಅವರು ಹುಣಸೆ ಹಣ್ಣಿನ ಚಿಂಚಾ ಪಾನಕವನ್ನು ಸೇವನೆಯಿಂದ ಆರೋಗ್ಯಕರ ಪ್ರಯೋಜನಗಳ ಕುರಿತು ವಿವರಿಸಿದರು.

ಈ ಸಂಧರ್ಬದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಅಡವಿಮಠ, ಯೋಜನಾ ನಿರ್ದೇಶಕ ಡಾ. ಕೃಷ್ಣರಾಜು, ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಆಯುಷ್ ಇಲಾಖೆ ಡಾ. ಚಂದ್ರಶೇಖರ್ ಜಂಬಗಿ, ಸರೋಜಿನ ಮಹಾನಕರ, ಸಂಜೀವಕುಮಾರ ದಾನೋಳಿ, ಗಿರೀಶ ಪಶುಪತಿಮಠ, ರೋಹಿಣಿ ಕಿಣಗಿ, ಪೊಲೀಸ್ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜುಲೈ 13 ರಂದು ಲೋಕ ಅದಾಲತ

ಬೆಳಗಾವಿ.ಏ. : ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದ ಮೇರೆಗೆ ವೈವಾಹಿಕ ಕೌಟುಂಬಿಕ ಮತ್ತು ಪಾಲೂ ವಿಭಾಗಕ್ಕೆ, ಬ್ಯಾಂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳು ಹಾಗೂ ಚೆಕ್ ಬೌನ್ಸ್, ಹಣಕಾಸಿನ ದಾವೆಗಳು, ಸಿವಿಲ್ ವ್ಯಾಜ್ಯಗಳು, ಮೋಟಾರ ವಾಹನ ಅಪಘಾತ ಪರಿಹಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಕಂದಾಯ ಪ್ರಕರಣಗಳು, ಮತ್ತು ಇತರೆ ಎಲ್ಲಾ ರೀತಿಯ ರಾಜಿಯಾಗಬಹುದಾದಂತಹ ಪ್ರಕರಣಗಳ ಕುರಿತು ಜು.7 ರಂದು ಬೆಳಗ್ಗೆ 11 ಗಂಟೆಯಿಂದ ಜಿಲ್ಲಾ ಎಲ್ಲಾ ನ್ಯಾಯಾಧೀಶರು ಹಾಗೂ ವಕೀಲರ ಸಹಯೋಗದಲ್ಲಿ ಲೋಕ ಆದಾಲತನ್ನು ಹಮ್ಮಿಕೊಳ್ಳಲಾಗಿದೆ. ಸದರಿ ನ್ಯಾಯಾಲಯಗಳಲ್ಲಿ ತನಿಖೆಗೆ ಬಾಕಿ ಇರುವ ಪ್ರಕರಣಗಳ ಕುರಿತು ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರಾದ ಗೌರವಾನ್ವಿತ ಎಲ್. ವಿಜಯಲಕ್ಷ್ಮೀ ದೇವಿ ಇವರ ಮಾರ್ಗದರ್ಶನದಲ್ಲಿ ಬೆಳಗಾವಿಯ ಎಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಎಲ್ಲಾ ತಾಲೂಕುಗಳ ನ್ಯಾಯಾಲಯಗಳಲ್ಲಿ ಜಿಲ್ಲಾ ಎಲ್ಲಾ ನ್ಯಾಯಾಧೀಶರು ಹಾಗೂ ವಕೀಲರ ಸಹಯೋಗದಲ್ಲಿ ಲೋಕ ಆದಾಲತನ್ನು ನಡೆಸಲಾಗುವುದು.

ಸದರಿ ಪ್ರಕರಣಗಳನ್ನು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತಗೆದುಕೊಂಡು ರಾಜಿ ಸಂದಾನದ ಮುಖಾಂತರ ಇತ್ಯರ್ಥ ಪಡಿಸಲಾಗುವುದು. ಬ್ಯಾಂಕ್‌ಗಳು, ಕಕ್ಷಿದಾರರು ಹಾಗೂ ಜನಸಾಮಾನ್ಯರು ಈ ಅವಕಾಶವನ್ನು ಸದುಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ ಅಥವಾ ತಾಲೂಕು ಕಾನೂನು ಸೇವಾ ಸಮಿತಿಗಳಯನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಜಿಲ್ಲಾ ಕಾನೂನು ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಪ್ರಕರನದಲ್ಲಿ ತಿಳಿಸಿದ್ದಾರೆ.

# ಏ.10 ರಂದು ವಿದ್ಯುತ್ ವ್ಯತ್ಯಯ

ಬೆಳಗಾವಿ.ಏ. : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಮೊದಲನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಏ.20 ರಂದು ಬೆಳಗ್ಗೆ 10 ಘಂಟೆಯಿಂದ ಸಾಯಂಕಾಲ 4 ಘಂಟೆಯವರೆಗೆ 110 ಕೆ.ವ್ಹಿ. ಹುದಲಿ ಉಪಕೇಂದ್ರದಿಂದ ಸರಬರಾಜುನಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.ಹುದಲಿ, ನಂದಿ ಕುಡಿಯುವ ನೀರಿನ ಘಟಕ, ಕುಮರಿ, ರಂಗದೋಳಿ, ತುಮ್ಮರಗುದ್ದಿ, ಸೋಮನಟ್ಟಿ, ಕಬಲಾಪೂರ, ಚಂದೂರ, ಖನಗಾಂವ ಕೆ.ಎಚ್, ಖನಗಾಂವ ಬಿ.ಕೆ, ಅಷ್ಟೆ, ಮುಚ್ಚಂಡಿ, ಕಲಕಾಂಬ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜುನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹುವಿಸಕಂನಿ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಕಿಸ್ತಾನ್ ಜಿಂದಾಬಾದ್ ಅಂತ ಯಾರು ಹೇಳಿಲ್ಲ-ನಾಗೇಂದ್ರ ಸಮರ್ಥನೆ




ಬಳ್ಳಾರಿ ಏ-: ರಾಜ್ಯ ಸಭಾ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಬೆಂಬಲಿಗರು ಪಾಕಿಸ್ತಾನ ಜಿಂದಾಬಾದ್ ಅಂತಾ ಹೇಳಿಯೇ ಇಲ್ಲ. ಯಾರೇ ಆಗಲಿ ಹಾಗೆ ಭಾರತದಲ್ಲಿದ್ದು ಹೇಳಿದರೆ ಅಂತಹವರನ್ನು ಗಲ್ಲಿಗೇರಿಸಿದರೂ ತಪ್ಪಿಲ್ಲ ಎಂದು ಸಚಿವ ಬಿ.ನಾಗೇಂದ್ರ ಹೇಳಿದ್ದಾರೆ.

ಅವರು ನಗರದಲ್ಲಿ ಕಾಂಗ್ರೆಸ್ ಕಚೇರಿ ಉದ್ಘಾಟನೆ ನಂತರ ಮಾಧ್ಯಮಗಳೊಂದಿಗೆ ಮಾತನಾಡುತ್ತಿದ್ದರು.ನಾಸೀರ್ ಹುಸೇನ್ ಅವರಿಗೆ ನಗರದಲ್ಲಿ ಅದ್ದೂರಿ ಮೆರವಣಿಗೆ ಮಾಡಿದ್ದಕ್ಕೆ ಬಿಜೆಪಿ ಆಕ್ರೋಶ ಪ್ರತಿಭಟಿಸಿದಕ್ಕೆ ಪ್ರತಿಕ್ರಿಯೆ ನೀಡಿದ ಅವರು. ನೂರಕ್ಕೆ ನೂರು ಪರ್ಸೆಂಟ್ ಪಾಕಿಸ್ತಾನ ಜಿಂದಾಬಾದ್ ಅಂದಿಲ್ಲ, ಅದನ್ನ ಕೆಲವರು ಎಡಿಟ್ ಮಾಡಿ, ಮ್ಯಾನಿಪ್ಲೇಟ್ ಮಾಡಿದ್ದಾರೆ. ಈ ಕುರಿತ ಪ್ರಕರಣದಲ್ಲಿ ಎಫ್ ಎಸ್ ಎಲ್ ವರದಿ ಇನ್ನೂ ಬಂದೇ ಇಲ್ಲ ಎಂದು ಮಾಧ್ಯಮದವರ ಜೊತೆ ಸಚಿವರು ವಾದ ಮಾಡಿದರು.

ವರದಿ ಬಂದಿಲ್ಲವಾದರೇ ಆರೋಪಿಗಳನ್ನ ಬಂಧಿಸಿದ್ದು ಯಾಕೆ ಎನ್ನುವ ಪ್ರಶ್ನೆಗೆ. ಸಾಮಾನ್ಯವಾಗಿ ಇಂತಹ ಪ್ರಕರಣವಾದಾಗ ಬಂಧನ ಮಾಡುವುದು ಒಂದು ಅಭ್ಯಾಸ. ಕೆಲವೊಮ್ಮೆ ಮುಗ್ದರನ್ನ ತೆಗೆದು ಕೊಂಡು ಹೋಗಿ ಒಳಗೆ ಹಾಕಿ. ಆಮೇಲೆ ಬೆಲ್ ಮೇಲೆ ಬಿಟ್ಟುಕೊಟ್ಟಿದ್ದಾರೆ ತನಿಖೆ ನ್ಯಾಯಾಲಯದಲ್ಲಿದೆ. ಕರ್ನಾಟಕದಲ್ಲಿ ಯಾರು ಹಾಗೆ ಮಾಡಲ್ಲ, ಮಾಡಿದ್ರೆ ಅವನನ್ನ ಗಲ್ಲಿಗೇರಿಸಿದ್ರು ತಪ್ಪಿಲ್ಲ ಎಂದರು.

ರಾಹುಲ್ ಗಾಂಧಿ ಅವರು ಕೋಲಾರದಲ್ಲಿ ಭಾಷಣ ಮಾಡುವಾಗ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಎಂದ ಬಗ್ಗೆ ಸಚಿವ ನಾಗೇಂದ್ರ ಪ್ರತಿಕ್ರಿಯಿಸಿ. ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಖುರ್ಚಿ ಖಾಲಿ ಇಲ್ಲ. ನಮ್ಮ ಅಧಿನಾಯಕರು ಯಾವ ಕಾರಣಕ್ಕೆ ಹಾಗೇ ಎಂದಿದ್ದಾರೋ ಗೊತ್ತಿಲ್ಲ. ಡಿ.ಕೆ.ಶಿವಕುಮಾರ್ ಅವರು ಸಿಎಂ ಆಗಬೇಕು ಅಂತಾ ಬಹಳ ಜನಕ್ಕೆ ಬಯಕೆ ಇದೆ, ಅದರಲ್ಲಿ ಏನು ತಪ್ಪಿಲ್ಲ. ಮಂತ್ರಿಯಾದವರಿಗೆ ಮುಖ್ಯಮಂತ್ರಿ ಆಗಬೇಕು ಅನ್ನುವ ಆಸೆ ಇರೋದು ಸಾಮಾನ್ಯ. ರಾಹುಲ್ ಗಾಂಧಿ ಅವರು ಬಾಯಿ ತಪ್ಪಿನಂದ ಹೇಳಿರಬಹುದು. ಶಿವಕುಮಾರ್ ಅವರೂ ಕೂಡ ಸಮರ್ಥ ನಾಯಕರಿದ್ದಾರೆ.

ಅವರಿಗೂ ಸಿಎಂ ಆಗೂವ ಎಲ್ಲಾ ಅರ್ಹತೆ ಇದೆ.ಸದ್ಯಕ್ಕೆ ಪಕ್ಷದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆ ಆಗಿಲ್ಲ ಎಂದರು. ಬಳ್ಳಾರಿ ಭಾಗದಲ್ಲಿ ಕಾಂಗ್ರೆಸ್ ಭದ್ರವಾಗಿದೆ. ವಿಜಯನಗರ ಜಿಲ್ಲೆಯಲ್ಲಿ ವೀಕ್ ಇದೆಂಬ ಮಾತುಗಳು ಸರಿಯಲ್ಲ ಕ್ಷೇತ್ರದ ಎಲ್ಲಡೆ ಕಾಂಗ್ರೆಸ್ ಗೆ ಉತ್ತಮ ಬೆಂಬಲ ಇದೆ. ನಮ್ಮ ಅಭ್ಯರ್ಥಿ ಗೆಲುವು ಖಚಿತ ಎಂದರು.

# ವೀವಿ ಸಂಘದ ಈಗಿನ ಪದಾಧಿಕಾರಿಗಳು ಮತ್ತು ಮಾಜಿ ಪದಾಧಿಕಾರಿಗಳ ಕಿರು ಸಭೆ



ಬಳ್ಳಾರಿ ಏ -: ಬಳ್ಳಾರಿ ನಗರದ ಪ್ರತಿಷ್ಠಿತ ಆರ್.ವೈ.ಎಂ.ಇ.ಸಿಯ ನೂತನ ಅಧ್ಯಕ್ಷರಾಗಿ ಜಾನೆಕುಂಟೆ ಬಸವರಾಜ ಅವರು ಅಧಿಕಾರ ಸ್ವೀಕರಿಸಿದ ಸಂದರ್ಭದಲ್ಲಿ ಅವರ ಪರವಾಗಿ ವೀವಿ ಸಂಘದ ಈಗಿನ ಪದಾಧಿಕಾರಿಗಳು ಮತ್ತು ಮಾಜಿ ಅಧಿಕಾರಿಗಳ ಕಿರು ಸಭೆಯನ್ನು 17/4/24 ರಂದು ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿತ್ತು. ವಿಧಾನ ಪರಿಷತ್ ಸದಸ್ಯ ಎಚರೆಡ್ಡಿ ಸತೀಶ್ ರೆಡ್ಡಿ, ವೀವಿ ಸಂಘದ ಮಾಜಿ ಅಧ್ಯಕ್ಷ ಉಡೆದ ಬಸವರಾಜ್,ಎಂಪಿ ಶೇಖರ್, ಜೆಎಸ್ ಬಸವರಾಜ್, ಕೋಳೂರು ಮಲ್ಲಿಕಾರ್ಜುನ ಗೌಡ, ಸಂಗನಕಲ್ ಹಿಮಂತರಾಜು, ನೇಪಾಕ್ಷಪ್ಪ, ಪಾಲಾಕ್ಷ ರೆಡ್ಡಿ, ಪ್ರಭುಸ್ವಾಮಿ , ನಂದಿ ವೀರನಗೌಡ ,ಸೋಮೇಶ್ವರ, ಮಹಾಲಿಂಗಯ್ಯ( ರಾಜಣ್ಣ ),ಕಿರಣ ಕುಮಾರ್ ,ದಂಡಿನ್ ಶಿವಾನಂದ ,ಜಾನೆ ಕುಂಟೆ ಪಂಪನಗೌಡ, ಅನೇಕ ಆಜೀವ ಸದಸ್ಯರು ಭಾಗವಹಿಸಿದ್ದರು. ಇದಲ್ಲದೆ ವೀವಿ ಸಂಘದ ಈಗಿನ ಪದಾಧಿಕಾರಿಗಳು ವೀ.ವಿ.ಸಂಘ ಅಧ್ಯಕ್ಷರು ಅಲ್ಲಂ ಗುರುಬಸವರಾಜ, ಉಪಾಧ್ಯಕ್ಷರು ಜಾನೇಕುಂಟೆ ಬಸವರಾಜ, ಕಾರ್ಯದರ್ಶಿಗಳು ಡಾಜ ಅರವಿಂದ್ ಪಟೇಲ್, ಸಹ ಕಾರ್ಯದರ್ಶಿಗಳು ಯಾಳ್ಪಿ ಮೇಟಿ ಪಂಪನಗೌಡ, ಕೋಶಾಧಿಕಾರಿಗಳು ಬೈಲುವದ್ದಿಗೇರಿ ಎರ್ರಿ ಸ್ವಾಮಿ ಭಾಗವಹಿಸಿದ್ದರು. ಆರ್ವೈಎಂಇಸಿಯ ಅಧ್ಯಾಪಕರು ಮತ್ತು ವಿದ್ಯಾರ್ಥಿ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ, ಹಾಗೂ ಆರ್.ವೈ.ಎಂ.ಇ.ಸಿಯ ಮಾಜಿ ಅಧ್ಯಕ್ಷ ಈಚರೆಡ್ಡಿ ಸತೀಶ್ ರೆಡ್ಡಿ, "ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ, ನಮ್ಮ ವಿದ್ಯಾರ್ಥಿಗಳು ಯಾವುದೇ ಸವಾಲಿನ ಸಂದರ್ಭಗಳನ್ನು ಎದುರಿಸಲು ತರಬೇತಿ ಮತ್ತು ಸಜ್ಜುಗೊಳಿಸಬೇಕು, ಜವಾಬ್ದಾರಿ ಶಿಕ್ಷಕರ ಸಮುದಾಯದ ಮೇಲಿದೆ, 2030 ರ ವೇಳೆಗೆ ಆರ್.ವೈ.ಎಂ.ಇ.ಸಿ. ಸ್ವಾಯತ್ತ ಎಂಜಿನಿಯರಿಂಗ್ ಕಾಲೇಜಾಗಬೇಕು " ಎಂದು ಮಾತನಾಡಿದರು. ಕಾರ್ಯದರ್ಶಿಗಳು ಡಾಜ ಅರವಿಂದ್ ಪಟೇಲ್ , ಸಹ ಕಾರ್ಯದರ್ಶಿಗಳು ಯಾಳ್ಪಿ ಮೇಟಿ ಪಂಪನಗೌಡ, ಕೋಶಾಧಿಕಾರಿಗಳು, "ಪರಿವರ್ತನೆ ಜಗದ ನಿಯಮ, ಪ್ರಸ್ತುತ ಸನ್ನಿವೇಶಗಳನ್ನು ಗಮನದಲ್ಲಿಟ್ಟುಕೊಂಡು, ಪಠ್ಯಕ್ರಮದಲ್ಲಿನ ಬದಲಾವಣೆಗಳನ್ನು ನವೀಕರಿಸಬೇಕು ಮತ್ತು ವಿದ್ಯಾರ್ಥಿಗಳಿಗೆ ಉತ್ತಮ ತರಬೇತಿ ನೀಡಬೇಕು" ಎಂದು ನುಡಿದರು.

ವೀ.ವಿ.ಸಂಘ ಅಧ್ಯಕ್ಷರು ಅಲ್ಲಂ ಗುರುಬಸವರಾಜ ಅಧ್ಯಕ್ಷೀಯ ಭಾಷಣದಲ್ಲಿ "ಈ ಸಂಸ್ಥೆಯ ಹಳೆಯ ವಿದ್ಯಾರ್ಥಿ, ಇಂಜಿನಿಯರ್ ಜಾನೇಕುಂಟೆ ಬಸವರಾಜ ಈ ಸಂಸ್ಥೆಯ ಅಧ್ಯಕ್ಷರಾಗಿರುವುದು ನಮಗೆ ಸಂತೋಷ ತಂದಿದೆ, ಅವರು ಪ್ರೋಡಾ ದೇವರಾಯ ಪಿಡಿಐಟಿ ಎಂಜಿನಿಯರಿಂಗ್ ಕಾಲೇಜಿನ ಅಧ್ಯಕ್ಷರಾಗಿ ಕೆಲಸ ಮಾಡಿದ ಅನುಭವವನ್ನು ಹೊಂದಿದ್ದಾರೆ, ಕರ್ನಾಟಕ ರಾಜ್ಯದ ಈ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತ್ಯುತ್ತಮ ಎಂಜಿನಿಯರಿಂಗ್ ಕಾಲೇಜು, ಕರ್ನಾಟಕ ರಾಜ್ಯದಲ್ಲಿಯೇ ನಂಬರ್ ಒನ್ ಕಾಲೇಜು ಆಗುವುದೆಂಬ ನಮ್ಮ ಆಶಯ, ವಿದ್ಯಾರ್ಥಿಗಳ ಶಕ್ತಿ, ಗುಣಮಟ್ಟ, ಭವಿಷ್ಯ ಉತ್ತಮವಾಗಿರಬೇಕು" ಎಂದು ನುಡಿದರು, ಕಾರ್ಯಕ್ರಮದಲ್ಲಿ ಪ್ರಾಂಶುಪಾಲರು, ಸಿಬ್ಬಂದಿ, ಭಾಗವಹಿಸಿದ್ದರು.